Received on 26/6/2020
Wup.

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/06/ಸುತ್ತೋಲೆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು-560001,
ದಿನಾಂಕ;25.06.2020.

# ಸುತ್ತೋಲೆ

**ವಿಷಯ:** ವಿಶ್ವವಿದ್ಯಾಲಯದ 2019-20 ನೇ ಸಾಲಿನ ವಾರ್ಷಿಕ ವರದಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವ ಬಗ್ಗೆ.

**ಉಲ್ಲೇಖ** :ಕುಲಸಚಿವರು ಮೈಸೂರು ವಿಶ್ವವಿದ್ಯಾಲಯ, ಮೈಸೂರು ಇವರ ಪತ್ರ ಸಂಖ್ಯೆ:ಯುಎ4/09(6)2019-2020,ದಿನಾಂಕ:09-06-2020

* * * * * * * *

ಮೈಸೂರು ವಿಶ್ವವಿದ್ಯಾಲಯ ಕುಲಸಚಿವರ ಉಲ್ಲೇಖಿತ ಪತ್ರದಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ 2000, ಪ್ರಕರಣ 50(1) ಪ್ರಕಾರ, ವಿಶ್ವವಿದ್ಯಾಲಯದ 2019-20 ನೇ ಸಾಲಿನ (ದಿನಾಂಕ:01-04-2019 ರಿಂದ 31-03-2020 ರವರೆಗಿನ ಅವಧಿ) ವಾರ್ಷಿಕ ವರದಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಿರುತ್ತದೆ. ಈ ಹಿನ್ನಲೆಯಲ್ಲಿ ಮೈಸೂರು ವಿಶ್ವವಿದ್ಯಾಲಯದ ಸಂಯೋಜನೆಗೆ ಒಳಪಟ್ಟ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗೀ ಅನುದಾನಿತ ಸ್ನಾತಕೋತ್ತರ ಪದವಿ ಕಾಲೇಜುಗಳು ಸ್ನಾತಕೋತ್ತರ ಕೇಂದ್ರಕ್ಕೆ ಸಂಬಂಧಿಸಿದ ಮಾಹಿತಿಯನ್ನು ಮೈಸೂರು ವಿಶ್ವವಿದ್ಯಾಲಯ ನೀಡಿರುವ ನಿಗಧಿತ ನಮೂನೆಯಲ್ಲಿ ದಿನಾಂಕ:30-06-2020 ರ ಒಳಗೆ ವಿಶೇಷಾಧಿಕಾರಿ (ಪ್ರಾಧಿಕಾರ), ಸಿಂಡಿಕೇಟ್ ವಿಭಾಗ, ಕ್ರಾಫರ್ಡ್‌ಭವನ, ಮೈಸೂರು ವಿಶ್ವವಿದ್ಯಾಲಯ ಮೈಸೂರು. ಇವರಿಗೆ ಸಲ್ಲಿಸುವಂತೆ ಕೋರಿರುತ್ತಾರೆ.

ಆದ್ದರಿಂದ ಸದರಿ ಮಾಹಿತಿಯನ್ನು ತುರ್ತಾಗಿ ನಿಗಧಿತ ದಿನಾಂಕದೊಳಗೆ ಮೈಸೂರು ವಿಶ್ವವಿದ್ಯಾಲಯಕ್ಕೆ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ. ಒಂದು ವೇಳೆ ಸದರಿ ಮಾಹಿತಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸದಿದ್ದಲ್ಲಿ ವಿಶ್ವವಿದ್ಯಾಲಯ ಕೈಗೊಳ್ಳುವ ನಿರ್ಧಾರಕ್ಕೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳೇ ನೇರ ಜವಾಬ್ದಾರರಾಗಿರುತ್ತಾರೆ ಎಂದು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ**

1. ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗೀ ಅನುದಾನಿತ ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಕಛೇರಿ ಪ್ರತಿ.

**ಪ್ರತಿಯನ್ನು :**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಮೈಸೂರು ಮಾಹಿತಿಗಾಗಿ.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯದ, ಕಾರ್ಯಸೌಧ, ಕ್ರಾಫರ್ಡ್ ಭವನ, ಮೈಸೂರು-5.
3. ಕಛೇರಿ ಪ್ರತಿ.